Akashvani : Bangalore
National Bulletin In Kannada
19.10.2024 / 7.35am
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

19.10.2024 / 7.35am
**********

ಮುಖ್ಯಾಂಶಗಳು:

1. ರಾಷ್ಟ್ರಪತಿ ದ್ರೌಪದಿ ಮುರ್ಮು ಮಲಾವಿ ಪ್ರವಾಸ; ಕೊನೆಯ ದಿನವಾದ ಇಂದು ಸಾಂಸ್ಕೃತಿಕ ಸ್ಥಳಗಳಿಗೆ ಭೇಟಿ
2. 'ಕರ್ಮಯೋಗಿ ಸಪ್ತಾಹ'ಕ್ಕೆ ಇಂದು ಪ್ರಧಾನಿ ನರೇಂದ್ರ ಮೋದಿ ಚಾಲನೆ
3. ಭಾರತ-ಸೌದಿ ಅರೇಬಿಯಾ ವ್ಯೂಹಾತ್ಮಕ ಪಾಲುದಾರಿಕೆ ಮಂಡಳಿಯ ಪರಿಶೀಲನಾ ಸಭೆ; ದ್ವಿಪಕ್ಷೀಯ ಸಹಕಾರ ವೃದ್ಧಿಗೆ ಒತ್ತು
4. ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್: ಎರಡನೇ ಸೆಮಿಫೈನಲ್ಸ್‌ನಲ್ಲಿ ವೆಸ್ಟ್ ಇಂಡೀಸ್ ಸೋಲಿಸಿ, ಫೈನಲ್ಸ್ ಪ್ರವೇಶಿಸಿದ ನ್ಯೂಜಿಲೆಂಡ್

******

ಮಲಾವಿ ದೇಶಕ್ಕೆ ಕೈಗೊಂಡಿರುವ ಮೂರು ದಿನಗಳ ಪ್ರವಾಸದ ಕೊನೆಯ ದಿನವಾದ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅಲ್ಲಿನ ಸಾಂಸ್ಕೃತಿಕ ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಿನ್ನೆ ಮಲಾವಿ ಅಧ್ಯಕ್ಷ ಲಾಜರಸ್ ಚಕ್ವೇರಾ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಬಳಿಕ ಭಾರತ-ಮಲಾವಿ ನಡುವೆ ನಿಯೋಗ ಮಟ್ಟದ ಮಾತುಕತೆ ನಡೆಯಿತು. ಕಲೆ ಮತ್ತು ಸಂಸ್ಕೃತಿ, ಕ್ರೀಡೆ, ಯುವಜನ ಮತ್ತು ಔಷಧೀಯ ಕ್ಷೇತ್ರಗಳಲ್ಲಿ ನಾಲ್ಕು ತಿಳುವಳಿಕೆ ಪತ್ರಗಳಿಗೆ ಉಭಯ ದೇಶಗಳು ಸಹಿ ಹಾಕಿವೆ. ಭಾರತವು ೧ ಸಾವಿರ ಮೆಟ್ರಿಕ್ ಟನ್ ಅಕ್ಕಿಯನ್ನು ಮಲಾವಿಗೆ ಪೂರೈಸುವುದಾಗಿ ಘೋಷಿಸಿದೆ. ಇದೇ ವೇಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮಲಾವಿಯಲ್ಲಿ ಶಾಶ್ವತ ಕೃತಕ ಅಂಗ ಬದಲಿ ಕೇಂದ್ರವನ್ನು ತೆರೆಯುವುದಾಗಿ

ಘೋಷಿಸಿದರು. ಇಂದು ರಾಷ್ಟ್ರಪತಿಗಳು ಶ್ರೀ ರಾಧಾ ಕೃಷ್ಣ ದೇವಸ್ಥಾನ ಮತ್ತು ಪ್ರಸಿದ್ಧ ಮಲಾವಿ ಸರೋವರಕ್ಕೆ ಭೇಟಿ ನೀಡಲಿದ್ದಾರೆ.

******

ನವದೆಹಲಿಯಲ್ಲಿಂದು ಕರ್ಮಯೋಗಿ ಸಪ್ತಾಹ-ರಾಷ್ಟ್ರೀಯ ಕಲಿಕಾ ಸಪ್ತಾಹಕ್ಕೆ ಪ್ರಧಾನಮಂತ್ರಿ ನರೇಂದ್ರ ಮೋದಿ ಚಾಲನೆ ನೀಡಲಿದ್ದಾರೆ. ಈ ವಾರದಲ್ಲಿ, ಪ್ರತಿ ಕರ್ಮಯೋಗಿಯು ಕನಿಷ್ಠ ನಾಲ್ಕು ಗಂಟೆಗಳ ಸಾಮರ್ಥ್ಯ-ಸಂಯೋಜಿತ ಕಲಿಕೆಯ ಗುರಿಯನ್ನು ಸಾಧಿಸಲು ಬದ್ಧರಾಗಿರುತ್ತಾರೆ. ದೃಢವಾದ ಡಿಜಿಟಲ್ ಪರಿಸರ ವ್ಯವಸ್ಥೆಯ ಸಹಾಯದಿಂದ ನಾಗರಿಕ ಕೇಂದ್ರಿತ ಆಡಳಿತವನ್ನು ಉತ್ತೇಜಿಸುವ ಉದ್ದೇಶದಿಂದ ಮಿಷನ್ ಕರ್ಮಯೋಗಿಯನ್ನು ಸೆಪ್ಟೆಂಬರ್ ೨೦೨೦ರಲ್ಲಿ ಪ್ರಾರಂಭಿಸಲಾಯಿತು. ಇದು ಸರ್ಕಾರಿ ನೌಕರರಿಗಾಗಿ ವಿನ್ಯಾಸಗೊಳಿಸಲಾದ ಸಾಮರ್ಥ್ಯ ನಿರ್ಮಾಣ ಮತ್ತು ಮಾನವ ಸಂಪನ್ಮೂಲ ನಿರ್ವಹಣೆಯ ಕಾರ್ಯಕ್ರಮವಾಗಿದೆ. ರಾಷ್ಟ್ರೀಯ ಕಲಿಕಾ ಸಪ್ತಾಹ, ವೈಯಕ್ತಿಕ ಮತ್ತು ಸಾಂಸ್ಥಿಕ ಸಾಮರ್ಥ್ಯದ ಅಭಿವೃದ್ಧಿಗೆ ಉತ್ತೇಜನ ನೀಡುತ್ತದೆ. ಈ ವಾರದಲ್ಲಿ, ಭಾಗವಹಿಸುವ ಪ್ರತಿ ಕರ್ಮಯೋಗಿಯು ಕನಿಷ್ಠ ನಾಲ್ಕು ಗಂಟೆಗಳ ಸಾಮರ್ಥ್ಯ-ಸಂಯೋಜಿತ ಕಲಿಕೆಯ ಗುರಿಯನ್ನು ಸಾಧಿಸಲು ಬದ್ಧರಾಗಿರುತ್ತಾರೆ. ಭಾಗವಹಿಸುವವರು ।ಉಔಖ ಪ್ಲಾಟ್‌ಫಾರ್ಮ್‌ನಲ್ಲಿ ಲಭ್ಯವಿರುವ ಕೋರ್ಸ್‌ಗಳನ್ನು ಪೂರ್ಣಗೊಳಿಸಬೇಕಾಗಿದೆ. ತಜ್ಞರು ವಿನ್ಯಾಸಗೊಳಿಸಿದ ವೆಬಿನಾರ್ ಸ್ವರೂಪದಲ್ಲಿ ಕೋರ್ಸ್‌ಗಳು ಲಭ್ಯವಿವೆ.

******

ಪ್ರಧಾನಮಂತ್ರಿ ನರೇಂದ್ರ ಮೋದಿ ಇದೇ ೨೨ ರಿಂದ ಎರಡು ದಿನ ರಷ್ಯಾಗೆ ಭೇಟಿ ನೀಡಲಿದ್ದು, ೧೬ನೇ ಬ್ರಿಕ್ಸ್ ಶೃಂಗದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಪ್ರವಾಸದ ವೇಳೆ ಪ್ರಧಾನಿ ನರೇಂದ್ರ ಮೋದಿ, ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಪ್ರಧಾನಿಗಳ ಜತೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದು, ರಕ್ಷಣೆ, ತಂತ್ರಜ್ಞಾನ ಸೇರಿದಂತೆ ವಿವಿಧ ವಿಷಯಗಳ ಕುರಿತು ಸಂವಾದ ನಡೆಸಲಿದ್ದಾರೆ. ಜಾಗತಿಕ ಅಭಿವೃದ್ಧಿ ಮತ್ತು ಸುರಕ್ಷತೆಯ ಬಲವರ್ಧನೆ ಸೇರಿದಂತೆ ಜಾಗತಿಕ ಸಮಸ್ಯೆಗಳ ಕುರಿತು ಸಮಾಲೋಚನೆ ನಡೆಸುವ ಉದ್ದೇಶವನ್ನು ಹೊಂದಲಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

******

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು ಇಂದು ರಾಜಸ್ಥಾನದ ಸಿಕಾರ್‌ಗೆ ಒಂದು ದಿನದ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ ಉಪರಾಷ್ಟ್ರಪತಿಗಳು, ಸಿಕಾರ್‌ನಲ್ಲಿರುವ ಸೊಭಾಸರಿಯಾ ಸಮೂಹ ಸಂಸ್ಥೆಗಳ ರಜತ ಮಹೋತ್ಸವದ ವಾರ್ಷಿಕ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

******

ಭಾರತ ಮತ್ತು ಸೌದಿ ಅರೇಬಿಯಾ ನವದೆಹಲಿಯಲ್ಲಿ ನಿನ್ನೆ ವ್ಯೂಹಾತ್ಮಕ ಪಾಲುದಾರಿಕೆ ಮಂಡಳಿಯ ರಾಜಕೀಯ, ಭದ್ರತೆ, ಸಾಮಾಜಿಕ ಮತ್ತು ಸಾಂಸ್ಕೃತಿಕ ಸಮಿತಿಯ ಕೆಲಸದ ಕುರಿತು ಪರಿಶೀಲನಾ ಸಭೆ ನಡೆಸಿತು. ಭಾರತೀಯ ನಿಯೋಗದ ನೇತೃತ್ವವನ್ನು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ವಹಿಸಿದ್ದರೆ, ಸೌದಿ ಅರೇಬಿಯಾದ ನಿಯೋಗವನ್ನು ರಾಜಕೀಯ ವ್ಯವಹಾರಗಳ ಖಾತೆಯ ಸಹಾಯಕ ಸಚಿವ ಡಾ. ಸೌದ್ ಅಲ್ ಸತಿ ನೇತೃತ್ವ ವಹಿಸಿದ್ದರು. ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆ ಉಭಯ ದೇಶಗಳು ದ್ವಿಪಕ್ಷೀಯ ಚರ್ಚೆ ನಡೆಸಿತು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

******

ಚುನಾವಣಾ ಆಯೋಗ ಜಾರ್ಖಂಡ್ ವಿಧಾನಸಭೆಯ ಮೊದಲ ಹಂತದ ಚುನಾವಣೆಗೆ ಅಧಿಸೂಚನೆ ಹೊರಡಿಸಿದೆ. ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ನಿನ್ನೆಯಿಂದ ಆರಂಭವಾಗಿದ್ದು, ಇದೇ ೨೫ ಕೊನೆಯ ದಿನವಾಗಿದೆ. ಜಾರ್ಖಂಡ್ ವಿಧಾನಸಭೆಗೆ ನವೆಂಬರ್ ೧೩ ಹಾಗೂ ೨೦ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ಇದೇ ವೇಳೆ, ಜಾರ್ಖಂಡ್ ವಿಧಾನಸಭಾ ಚುನಾವಣೆಗೆ ಎನ್‌ಡಿಎ ಮಿತ್ರಪಕ್ಷಗಳ ನಡುವೆ ಸೀಟು ಹಂಚಿಕೆ ಸೂತ್ರವನ್ನು ಪ್ರಕಟಿಸಲಾಗಿದೆ. ಬಿಜೆಪಿ ೬೮ ಸ್ಥಾನಗಳಲ್ಲಿ ಸ್ಪರ್ಧಿಸಲಿದ್ದು, ಎಜೆಎಸ್‌ಯು ಪಕ್ಷಕ್ಕೆ ೧೦ ಸ್ಥಾನಗಳನ್ನು ನೀಡಲಾಗಿದೆ. ಜೆಮ್ಶೆಡ್‌ಪುರ ಪಶ್ಚಿಮ ಮತ್ತು ತಮರ್ - ಎರಡು ವಿಧಾನಸಭಾ ಕ್ಷೇತ್ರಗಳನ್ನು ಜೆಡಿಯು ಗೆ ಹಾಗೂ ಚತ್ರ ವಿಧಾನಸಭಾ ಕ್ಷೇತ್ರವನ್ನು ಚಿರಾಗ್ ಪಾಸ್ವಾನ್ ನೇತೃತ್ವದ ಎಲ್‌ಜೆಪಿಗೆ ನೀಡಲಾಗಿದೆ ಎಂದು ಬಿಜೆಪಿಯ ಜಾರ್ಖಂಡ್ ಚುನಾವಣಾ ಸಹ-ಪ್ರಭಾರಿ ಹಿಮಂತ ಬಿಸ್ವಾ ಶರ್ಮಾ ಮಾಹಿತಿ ನೀಡಿದ್ದಾರೆ.

******

ಭಾರತೀಯ ಚಲನಚಿತ್ರಗಳನ್ನು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಶ್ಲಾಘಿಸಿದ್ದು, ರಷ್ಯಾದ ಪ್ರೇಕ್ಷಕರಲ್ಲಿ ಅವು ಬಹಳ ಜನಪ್ರಿಯವಾಗಿವೆ ಎಂದು ಹೇಳಿದ್ದಾರೆ. ಮುಂದಿನ ವಾರ ಬ್ರಿಕ್ಸ್ ಶೃಂಗಸಭೆಗೆ ಮುನ್ನ ಮಾಸ್ಕೋದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಪುಟಿನ್, ರಷ್ಯಾದಲ್ಲಿ ಭಾರತೀಯ ಚಲನಚಿತ್ರಗಳ ಪ್ರದರ್ಶನವನ್ನು ಮತ್ತಷ್ಟು ಉತ್ತೇಜಿಸಲು ಭಾರತದೊಂದಿಗೆ ಶೀಘ್ರದಲ್ಲೇ ಚರ್ಚೆಗಳು ನಡೆಯಲಿದೆ ಎಂದರು. ಭಾರತ ಮತ್ತು ರಷ್ಯಾ ಬಲವಾದ ಸಾಂಸ್ಕೃತಿಕ ಬಾಂಧವ್ಯವನ್ನು ಹೊಂದಿವೆ. ಸಿನಿಮಾದ ಜೊತೆಗೆ, ಔಷಧ ಸೇರಿದಂತೆ ಇತರೆ ಕ್ಷೇತ್ರಗಳಲ್ಲಿ ಉಭಯ ದೇಶಗಳು ಸಹಕಾರ ಹೊಂದಿವೆ ಎಂದು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹೇಳಿದರು.

******

ಎನ್‌ಸಿಪಿ ನಾಯಕ ಬಾಬಾ ಸಿದ್ದಿಕಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಿನ್ನೆ ಮುಂಬೈ ಪೊಲೀಸರು ಇನ್ನೂ ಐವರು ಶಂಕಿತರನ್ನು ಬಂಧಿಸಿದ್ದಾರೆ. ಈ ಮೂಲಕ ಈ ಪ್ರಕರಣದಲ್ಲಿ ಇಲ್ಲಿಯವರೆಗೆ ಬಂಧಿತರಾದವರ ಸಂಖ್ಯೆ ೯ಕ್ಕೇರಿದೆ. ನಿಖರ ಮಾಹಿತಿಯ ಮೇರೆಗೆ ಅಪರಾಧ ವಿಭಾಗ ರಾಯಗಢ ಜಿಲ್ಲೆಯ ಪನ್ವೆಲ್ ಮತ್ತು ಕರ್ಜಾತ್ ಪ್ರದೇಶದಲ್ಲಿ ದಾಳಿ ನಡೆಸಿತು. ಬಂಧಿತರ ಗುಂಪು, ಹತ್ಯೆಯಲ್ಲಿ ಪಾಲ್ಗೊಂಡ ಆರೋಪಿಗಳಿಗೆ ಶಸ್ತ್ರಾಸ್ತ್ರಗಳನ್ನು ಪೂರೈಸಿದ್ದರು ಎಂದು ಸ್ಥಳೀಯ ಪೊಲೀಸ್ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

******

ಭೂತಾನ್‌ನ ಇಂಧನ ಮತ್ತು ನೈಸರ್ಗಿಕ ಸಂಪನ್ಮೂಲ ಸಚಿವ ಲಿಯಾನ್ಪೊ ಜೆಮ್ ತ್ಶೆರಿಂಗ್ ಅವರು ನಿನ್ನೆ ನವದೆಹಲಿಯಲ್ಲಿ ಕೇಂದ್ರ ಇಂಧನ ಸಚಿವ ಮನೋಹರ್ ಲಾಲ್ ಕಟ್ಟರ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಜಲವಿದ್ಯುತ್ ವಲಯದಲ್ಲಿ ಉಭಯ ರಾಷ್ಟ್ರಗಳ ನಡುವಿನ ದೀರ್ಘಕಾಲದ ಸಹಕಾರವನ್ನು ಬಲಪಡಿಸುವ ಬಗ್ಗೆ ಸಭೆಯು ಗಮನಹರಿಸಿತು. ಪುನಾ-೧ ಜಲವಿದ್ಯುತ್ ಶಕ್ತಿ ಯೋಜನೆಯಿಂದ ಇಂಧನ ಉತ್ಪಾದನೆಯನ್ನು ಮತ್ತಷ್ಟು ಹೆಚ್ಚಿಸಲು ತಮ್ಮ ಸಹಯೋಗವನ್ನು ಹೆಚ್ಚಿಸುವ ಕುರಿತು ಎರಡೂ ಕಡೆಯವರು ಚರ್ಚಿಸಿದರು. ಭೂತಾನ್‌ನೊಂದಿಗೆ ಜಲವಿದ್ಯುತ್ ಅಭಿವೃದ್ಧಿಯನ್ನು ಮುಂದುವರೆಸುವ ಭಾರತದ ಬದ್ಧತೆಯನ್ನು ಸಚಿವ ಮನೋಹರ್ ಲಾಲ್ ಕಟ್ಟರ್

ಪುನರುಚ್ಚರಿಸಿದರು. ಭಾರತ ಮತ್ತು ಭೂತಾನ್ ಜಲವಿದ್ಯುತ್ ಕ್ಷೇತ್ರದಲ್ಲಿ ದೃಢವಾದ ಪಾಲುದಾರಿಕೆಯನ್ನು ಹಂಚಿಕೊಳ್ಳುತ್ತವೆ. ಹಲವಾರು ಪ್ರಮುಖ ಯೋಜನೆಗಳು ಭೂತಾನ್‌ನ ಆರ್ಥಿಕತೆಗೆ ಗಣನೀಯವಾಗಿ ಕೊಡುಗೆ ನೀಡುತ್ತವೆ ಮತ್ತು ಭಾರತಕ್ಕೆ ನವೀಕರಿಸಬಹುದಾದ ಇಂಧನವನ್ನು ಒದಗಿಸುತ್ತವೆ. ಈ ಸಭೆಯು ದ್ವಿಪಕ್ಷೀಯ ಸಂಬಂಧಗಳನ್ನು ಗಾಢಗೊಳಿಸುವ ಮತ್ತು ಸುಸ್ಥಿರ ಇಂಧನ ಸಹಕಾರದ ಮೂಲಕ ಪ್ರಾದೇಶಿಕ ಇಂಧನ ಭದ್ರತೆಯನ್ನು ಹೆಚ್ಚಿಸುವಲ್ಲಿ ಮತ್ತೊಂದು ಹೆಜ್ಜೆಯಾಗಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

******

ಯುಎಇ ಯ ಶಾರ್ಜಾದಲ್ಲಿ ನಿನ್ನೆ ನಡೆದ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಎರಡನೇ ಸೆಮಿಫೈನಲ್‌ನಲ್ಲಿ ನ್ಯೂಜಿಲೆಂಡ್ ತಂಡ ವೆಸ್ಟ್ ಇಂಡೀಸ್ ವಿರುದ್ಧ ೮ ರನ್‌ಗಳ ಜಯದೊಂದಿಗೆ ಫೈನಲ್ಸ್ ಪ್ರವೇಶಿಸಿದೆ. ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡ ನ್ಯೂಜಿಲೆಂಡ್, ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೨೮ ರನ್ ಗಳಿಸಿತು. ಇದಕ್ಕೆ ಉತ್ತರವಾಗಿ ವೆಸ್ಟ್ ಇಂಡೀಸ್, ೮ ವಿಕೆಟ್ ನಷ್ಟಕ್ಕೆ ೧೨೦ ರನ್‌ಗಳಿಸಲಷ್ಟೇ ಶಕ್ತವಾಯಿತು. ನಾಳೆ ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿರುವ ಟೂರ್ನಿಯ ಫೈನಲ್ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡ ದಕ್ಷಿಣ ಆಫ್ರಿಕಾ ತಂಡವನ್ನು ಎದುರಿಸಲಿದೆ.

******

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ- ನ್ಯೂಜಿಲ್ಯಾಂಡ್ ನಡುವಿನ ಟೆಸ್ಟ್ ಸರಣಿಯ ಮೊದಲ ಪಂದ್ಯದ ೩ನೇ ದಿನದಾಟದ ಅಂತ್ಯಕ್ಕೆ ನಿನ್ನೆ ಭಾರತ ತಂಡ, ೩ ವಿಕೆಟ್ ನಷ್ಟಕ್ಕೆ ೨೩೧ ರನ್ ಮಾಡಿದೆ. ಈ ಮೂಲಕ ನ್ಯೂಜಿಲೆಂಡ್ ತಂಡಕ್ಕಿಂತ ೧೨೫ ರನ್‌ಗಳ ಹಿನ್ನಡೆಯಲ್ಲಿದೆ. ಇಂದು ನಾಲ್ಕನೇ ದಿನದಾಟ ಮುಂದುವರಿಯಲಿದೆ.

******

ಡೆನ್ಮಾರ್ಕ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಮಹಿಳೆಯರ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿಂದು ಇಂಡೋನೇಷ್ಯಾದ ಗ್ರೆಗೋರಿಯಾದ ಮರಿಸ್ಕಾ ತುಂಜಂಗ್ ವಿರುದ್ಧ ಭಾರತದ

ಪಿ.ವಿ.ಸಿಂಧು ಪರಾಭವಗೊಂಡಿದ್ದಾರೆ. ೧೩-೨೧, ೨೧-೧೬ ಮತ್ತು ೯-೨೧ ಸೆಟ್‌ಗಳ ಅಂತರದಿಂದ ಇಂಡೋನೇಷ್ಯಾ ಆಟಗಾರ್ತಿ ವಿರುದ್ಧ ಪಿ.ವಿ.ಸಿಂಧು ಸೋತು, ಪಂದ್ಯಾವಳಿಯಿಂದ ಹೊರಬಿದ್ದಿದ್ದಾರೆ.

******

ಮುಂದಿನ ೨ ರಿಂದ ೩ ದಿನಗಳ ಕಾಲ ಕರ್ನಾಟಕ, ಕೇರಳ, ಮಾಹೆ ಮತ್ತು ಲಕ್ಷದ್ವೀಪದ ಹಲವೆಡೆ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇದೇ ವೇಳೆ ತಮಿಳುನಾಡು, ಗೋವಾ, ಮಹಾರಾಷ್ಟ್ರ, ಪುದುಚೆರಿ, ತೆಲಂಗಾಣ ಮತ್ತು ಆಂಧ್ರ ಪ್ರದೇಶದ ಕರಾವಳಿಯ ಹಲವು ಪ್ರದೇಶಗಳಲ್ಲಿ ಮುಂದಿನ ಒಂದು ವಾರದ ಕಾಲ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

******

ದೆಹಲಿಯಲ್ಲಿ ನಿನ್ನೆ ಆಯೋಜಿಸಲಾಗಿದ್ದ ಡಿಆರ್‌ಡಿಒ ಕೈಗಾರಿಕಾ ಕಾರ್ಯಾಗಾರದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪಾಲ್ಗೊಂಡಿದ್ದರು. ಈ ವೇಳೆ ಮಾತನಾಡಿದ ಅವರು, ವಿಭಿನ್ನ ತಂತ್ರಜ್ಞಾನಗಳು ಇಂದು ವೇಗವಾಗಿ ಅಭಿವೃದ್ಧಿಯಾಗುತ್ತಿದ್ದು, ಪರಿವರ್ತನೆಗೆ ಕಾರಣವಾಗಿವೆ. ರಕ್ಷಣಾ ವಲಯ ಕೂಡ ತಂತ್ರಜ್ಞಾನದಿಂದ ವ್ಯಾಪಕ ಪರಿವರ್ತನೆ ಹೊಂದುತ್ತಿದೆ ಎಂದು ಹೇಳಿದ್ದಾರೆ. ರಕ್ಷಣಾ ತಂತ್ರಜ್ಞಾನದ ಬಳಕೆಯನ್ನು ಹೆಚ್ಚಿಸುವ ಅಗತ್ಯವಿದೆ. ಪ್ರಸಕ್ತ ಸನ್ನಿವೇಶದಲ್ಲಿ, ಸಾಂಪ್ರದಾಯಿಕ ಯುದ್ಧ ಮಾದರಿಯಲ್ಲಿ ಭಾರೀ ಬದಲಾವಣೆಯಾಗಿದೆ. ಭೂಮಿ, ಸಮುದ್ರ, ವಾಯು, ಯುದ್ಧ ಸಲಕರಣೆಗಳಲ್ಲಿ ಅಭೂತಪೂರ್ವ ಸಾಧನೆಯಾಗಿದೆ. ಹೊಸ ತಂತ್ರಜ್ಞಾನಗಳು, ಅಸಾಂಪ್ರದಾಯಿಕ ಮಾದರಿಯ ಯುದ್ಧ ಶೈಲಿಗೆ ಚಾಲನೆ ನೀಡಿವೆ ಎಂದರು.

******